**Akashvani : Bangalore**
**National Bulletin In Kannada**
**04.02.2025 / 19.35 hrs**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**04.02.2025 / 19.35 hrs**

**<><*<><>*><>**

<u>ಮುಖ್ಯಾಂಶಗಳು</u>

**೧. ೨೫ ಕೋಟಿ ಜನರು ಬಡತನದಿಂದ ಮುಕ್ತ; ರಾಷ್ಟ್ರಪತಿಗಳ ಭಾಷಣದ ಮೇಲಿನ ವಂದನಾ ನಿರ್ಣಯದ ಚರ್ಚೆಯಲ್ಲಿ ಪ್ರಧಾನಿ ನರೇಂದ್ರ ಮೋದಿ**

**೨. ಮೂರು ಸಾವಿರದ ೨೩೨ ಕಿಲೋಮಿಟರ್ ಭಾರತ- ಬಾಂಗ್ಲಾ ಗಡಿಗೆ ಬೇಲಿ- ಕೇಂದ್ರ ಸರ್ಕಾರ**

**೩. ನಾಳೆ ನಡೆಯಲಿರುವ ದೆಹಲಿ ವಿಧಾನಸಭಾ ಚುನಾವಣೆಗೆ ರಾಷ್ಟ್ರ ರಾಜಧಾನಿ ಸಜ್ಜು**

**೪. ೩೮ನೇ ರಾಷ್ಟ್ರೀಯ ಕ್ರೀಡಾಕೂಟ; ಬ್ಯಾಡ್ಮಿಂಟನ್‌ನಲ್ಲಿ ತಮಿಳುನಾಡಿನ ಸತೀಶ್ ಕುಮಾರ್‌ಗೆ ಎರಡು ಚಿನ್ನದ ಪದಕ**

**<><*<><>*><>**

ಬಡಜನರ ಕಲ್ಯಾಣಕ್ಕಾಗಿ ಕೇಂದ್ರ ಸರ್ಕಾರ, ಹಲವಾರು ಕ್ರಮಗಳನ್ನು ಕೈಗೊಂಡಿದೆ. ೨೫ ಕೋಟಿ ಜನರನ್ನು ಬಡತನದಿಂದ ಮೇಲೆತ್ತಲಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಹೇಳಿದ್ದಾರೆ. ರಾಷ್ಟ್ರಪತಿಗಳ ಭಾಷಣದ ಮೇಲಿನ ವಂದನಾ ನಿರ್ಣಯದ ಚರ್ಚೆಗೆ ಉತ್ತರಿಸಿದ ಪ್ರಧಾನಿ, ಸರ್ಕಾರವು ಆರ್ಥಿಕ ವಿವೇಕವನ್ನು ಪಾಲಿಸುತ್ತಾ ಅಭಿವೃದ್ಧಿಗಾಗಿ ಕೆಲಸ ಮಾಡುತ್ತಿದೆ ಎಂದರು. ರಾಷ್ಟ್ರಪತಿಗಳ ಭಾಷಣ ಸ್ಫೂರ್ತಿಧಾಯಕವಾಗಿದೆ. ವಿಕಸಿತ ಭಾರತದ ನಿಟ್ಟಿನಲ್ಲಿ ಸರ್ಕಾರದ ಪ್ರಯತ್ನಗಳಿಗೆ ಹೆಚ್ಚಿನ ಬಲವನ್ನು ನೀಡಿದೆ ಎಂದು ಹೇಳಿದರು. ಕೇಂದ್ರ ಸರ್ಕಾರದಿಂದ ಬಡವರಿಗೆ ೪ ಕೋಟಿ ಮನೆಗಳನ್ನು ಒದಗಿಸಲಾಗಿದೆ. ದೇಶಾದ್ಯಂತ ೧೨ ಕೋಟಿ ಶೌಚಾಲಯಗಳನ್ನು ನಿರ್ಮಿಸಲಾಗಿದೆ. ಇದು ಕೋಟ್ಯಂತರ ಜನರಿಗೆ, ವಿಶೇಷವಾಗಿ ಮಹಿಳೆಯರ ಜೀವನವನ್ನು ಸುಲಭಗೊಳಿಸಿದೆ ಎಂದರು. 'ಜಲಜೀವನ್ ಮಿಷನ್' ಅಡಿಯಲ್ಲಿ ಜನರಿಗೆ ೧೨ ಕೋಟಿಗೂ ಹೆಚ್ಚು ನಲ್ಲಿ ನೀರಿನ ಸಂಪರ್ಕಗಳ ಮೂಲಕ ಶುದ್ಧ ಕುಡಿಯುವ ನೀರನ್ನು ಒದಗಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು. ಸರ್ಕಾರವು, ಆಡಳಿತದಲ್ಲಿ ಪಾರದರ್ಶಕತೆಯನ್ನು ತಂದಿದೆ. ಇದರಿಂದಾಗಿ ಕೋಟ್ಯಾಂತರ ರೂಪಾಯಿ ಉಳಿತಾಯವಾಗಿದೆ. ಸೂಕ್ತ ಫಲಾನುಭವಿಗಳನ್ನು ಗುರುತಿಸುವ ಮೂಲಕ ೩ ಲಕ್ಷ ಕೋಟಿ ರೂಪಾಯಿ ಉಳಿಸಲಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು. ಕಳೆದ ಹತ್ತು ವರ್ಷಗಳಲ್ಲಿ ಮಧ್ಯಮ ವರ್ಗಕ್ಕೆ ತೆರಿಗೆ ಪ್ರೋತ್ಸಾಹ ನೀಡಲು ವಿವಿಧ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ. ಇತ್ತೀಚೆಗೆ ಸರ್ಕಾರವು, ೧೨ ಲಕ್ಷ ರೂಪಾಯಿವರೆಗೆ ಆದಾಯ ತೆರಿಗೆ ರಿಯಾತಿಯನ್ನು ಘೋಷಿಸಿದೆ. ಇದು ಮಧ್ಯಮ ವರ್ಗದ ಹಣಕಾಸು ಬಲಪಡಿಸುವತ್ತ ಒಂದು ಪ್ರಮುಖ ಹೆಜ್ಜೆಯಾಗಿದೆ. ಅಲ್ಲದೆ, ಕೇಂದ್ರ ಸರ್ಕಾರ, ದೇಶದ ಯುವಕರಿಗೆ ಉದ್ಯೋಗವಕಾಶಗಳನ್ನು ಹೆಚ್ಚಿಸಿದೆ ಎಂದು ಪ್ರಧಾನಿ ಹೇಳಿದರು. ಇನ್ನೊಂದೆ ರಾಜ್ಯಸಭೆಯಲ್ಲಿ ಕೂಡ

ರಾಷ್ಟ್ರಪತಿಗಳ ಭಾಷಣದ ಮೇಲಿನ ವಂದನಾ ನಿರ್ಣಯದ ಚರ್ಚೆ ನಡೆಸಲಾಯಿತು. ಚರ್ಚೆಯಲ್ಲಿ ಭಾಗವಹಿಸಿದ್ದ ಬಿಜೆಪಿ ಹಿರಿಯ ನಾಯಕ ಬನ್ಸಿಲಾಲ್ ಗುರ್ಜರ್, ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರದ ಅಡಿಯಲ್ಲಿ ಭಾರತ, ಅಭಿವೃದ್ಧಿ ಮತ್ತು ಸಮೃದ್ಧಿಯ ಹಾದಿಯಲ್ಲಿ ಮುಂದುವರೆಯುತ್ತಿದೆ ಎಂದು ಹೇಳಿದರು. ನಿರ್ದಿಷ್ಟ ಸಮದಯದೊಳಗೆ ವಿಕಸಿತ ಭಾರತದ ಗುರಿಯನ್ನು ಸಾಧಿಸುವ ನಿಟ್ಟಿನಲ್ಲಿ ಕಳೆದ ಹತ್ತು ವರ್ಷಗಳಿಂದ ಸರ್ಕಾರ ಕಾರ್ಯ ನಿರ್ವಹಿಸುತ್ತಿದೆ. ಸರ್ಕಾರದ ಅನೇಕ ಯೋಜನೆಗಳಿಂದ ತಳಮಟ್ಟದ ಜನರಿಗೆ ಪ್ರಯೋಜನವಾಗುತ್ತಿದೆ ಎಂದು ಅವರು ತಿಳಿಸಿದರು.

**ಧ್ವನಿ: ಪ್ರಧಾನಿ ನರೇಂದ್ರ ಮೋದಿ ( 31**

**<><*<><>*><>**

ಭಾರತ ಮತ್ತು ಬಾಂಗ್ಲಾ ಒಟ್ಟು ೪ ಸಾವಿರದ ೯೬ ಕಿಲೋಮೀಟರ್ ಗಡಿ ಹೊಂದಿದ್ದು, ಈ ಪೈಕಿ ೩ ಸಾವಿರದ ೨೩೨ ಕಿಲೋಮೀಟರ್‌ಗೂ ಹೆಚ್ಚು ಗಡಿಗೆ ಬೇಲಿ ಹಾಕಲಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಈ ಕುರಿತು ಲೋಕಸಭೆಗೆ ಇಂದು ಲಿಖಿತ ಉತ್ತರ ನೀಡಿದ ಕೇಂದ್ರ ಗೃಹ ಖಾತೆ ರಾಜ್ಯ ಸಚಿವ ನಿತ್ಯಾನಂದ ರೈ, ಗಡಿಯಾಚೆಗಿನ ಅಪರಾಧ ಚಟುವಟಿಕೆಗಳು, ಕಳ್ಳಸಾಗಣೆಯಂತಹ ಸವಾಲುಗಳನ್ನು ಪರಿಣಾಮಕಾರಿಯಾಗಿ ಪರಿಹರಿಸುವ ಮೂಲಕ ಅಪರಾಧ ಮುಕ್ತ ಗಡಿಯನ್ನು ಖಚಿತಪಡಿಸಿಕೊಳ್ಳಲು ಬೇಲಿ ಸಹಾಯ ಮಾಡುತ್ತದೆ ಎಂದು ಹೇಳಿದರು.

**<><*<><>*><>**

ಪ್ರಧಾನಮಂತ್ರಿ ಇಂಟರ್ನ್‌ಶಿಪ್ ಯೋಜನೆಯ ಮೂಲಕ ಪ್ರಸಕ್ತ ಸಾಲಿನಲ್ಲಿ ೧ ಲಕ್ಷಕ್ಕೂ ಅಧಿಕ ಯುವಜನರಿಗೆ ಮಾರುಕಟ್ಟೆಯ ಅಗತ್ಯಕ್ಕೆ ತಕ್ಕಂತೆ ತರಬೇತಿ ನೀಡುವ ಗುರಿ ಹೊಂದಲಾಗಿದೆ ಎಂದು ಕೇಂದ್ರ ಹಣಕಾಸು ಹಾಗೂ ಕಾರ್ಪೋರೇಟ್ ವ್ಯವಹಾರಗಳ ಸಚಿವೆ ನಿರ್ಮಲಾ ಸೀತಾರಾಮನ್ ತಿಳಿಸಿದ್ದಾರೆ. ರಾಜ್ಯಸಭೆಯಲ್ಲಿ ಇಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದ ಅವರು, ಉದ್ಯೋಗಾಸಕ್ತರಲ್ಲಿ ಅನೇಕರು ಮಾರುಕಟ್ಟೆಯ ಅಗತ್ಯಕ್ಕೆ ತಕ್ಕ ಕೌಶಲ್ಯಗಳನ್ನು ಹೊಂದಿರುವುದಿಲ್ಲ. ಈ ಕೊರತೆ ನಿವಾರಣೆಗೆ ವಿವಿಧ ಕಂಪನಿಗಳ ಸಹಯೋಗದಲ್ಲಿ ಯೋಜನೆ ಆರಂಭಿಸಲಾಗಿದ್ದು, ಉದ್ಯಮಕ್ಕೆ ಯುವಜನರನ್ನು ಸಿದ್ಧಪಡಿಸುವುದು ಯೋಜನೆಯ ಮೂಲ ಉದ್ದೇಶವಾಗಿದೆ. ಇದರಡಿ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಹಾಗೂ ಇತರೆ ಹಿಂದುಳಿದ ವರ್ಗದ ಅಭ್ಯರ್ಥಿಗಳಿಗೆ ಸಂವಿಧಾನಾತ್ಮಕವಾಗಿ ಸ್ಥಾನ ನೀಡಲಾಗುವುದು ಎಂದರು. ಆಸಕ್ತ ಕಂಪನಿಗಳು ತಮ್ಮ ಜಿಲ್ಲೆ ಹಾಗೂ ರಾಜ್ಯದ ವ್ಯಾಪ್ತಿಯಲ್ಲಿ ಅಭ್ಯರ್ಥಿಗಳನ್ನು ಗುರುತಿಸಲು ಈ ಯೋಜನೆ ನೆರವಾಗಲಿದೆ. ಮಹಿಳಾ ಅಭ್ಯರ್ಥಿಗಳಿಗೆ ವಿಶೇಷ ಆದ್ಯತೆ ನೀಡಲಾಗುತ್ತಿದ್ದು, ಯೋಜನೆಯನ್ನು ಉತ್ತಮ ರೀತಿಯಲ್ಲಿ ಬಳಸಿಕೊಳ್ಳಬೇಕು. ಯೋಜನೆಯಡಿ, ೪ ಸಾವಿರದ ೫೦೦ ರೂಪಾಯಿಗಳನ್ನು ಕೇಂದ್ರ ಸರ್ಕಾರ ಹಾಗೂ ೫೦೦ ರೂಪಾಯಿಯನ್ನು ಕಂಪನಿಗಳು ಭರಿಸುತ್ತವೆ. ಯುವಜನರಿಗೆ ಯೋಜನೆಯ ಲಾಭ ದೊರೆಯುವಂತಾಗಲು ದೇಶಾದ್ಯಂತ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ಸಚಿವೆ ನಿರ್ಮಲಾ ಸೀತಾರಾಮನ್ ಮಾಹಿತಿ ನೀಡಿದರು.

**<><*<><>*><>**

ಭವಿಷ್ಯದಲ್ಲಿ ಉದ್ಭವಿಸಬಹುದಾದ ಯಾವುದೇ ಸಾಂಕ್ರಮಿಕ ರೋಗವನ್ನು ಎದುರಿಸಲು ದೇಶವು ದೃಢವಾದ ವ್ಯವಸ್ಥೆಯನ್ನು ಹೊಂದಿದೆ ಎಂದು ಕೇಂದ್ರ ಆರೋಗ್ಯ ಸಚಿವ ಜೆ.ಪಿ.ನಡ್ಡಾ ಹೇಳಿದ್ದಾರೆ. ರಾಜ್ಯಸಭೆಯಲ್ಲಿಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದ ಅವರು, ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಭಾರತವು ಯಾವುದೇ

ಮಹಾಮಾರಿಯನ್ನು ಎದುರಿಸಲು ತನ್ನ ಬಲಿಷ್ಠ ಮತ್ತು ಸಹನಶೀಲ ವ್ಯವಸ್ಥೆಯನ್ನು ಹೊಂದಿದೆ ಎಂದರು. ರಾಷ್ಟ್ರೀಯ ರೋಗ ನಿಯಂತ್ರಣಾ ಕೇಂದ್ರ, ಯಾವುದೇ ಹೊಸ ಮಹಾಮಾರಿಯ ಮೇಲ್ವಿಚಾರಣೆ ನಡೆಸುವ ಪ್ರಮುಖ ಸಂಸ್ಥೆಯಾಗಿದ್ದು, ಭಾರತೀಯ ವೈದ್ಯಕೀಯ ಸಂಶೋಧನಾ ಮಂಡಳಿ, ೧೫೦ ವೈರಸ್ ಸಂಶೋಧನಾ ಪ್ರಯೋಗಾಲಯಗಳನ್ನು ಹೊಂದಿದೆ ಎಂದು ಅವರು ತಿಳಿಸಿದರು.

<><*<><>*><>

ಕಳೆದ ೨ ವರ್ಷಗಳಲ್ಲಿ ಭಾರತಕ್ಕೆ ಭೇಟಿ ನೀಡುವ ವಿದೇಶಿ ಪ್ರವಾಸಿಗರ ಸಂಖ್ಯೆ ಶೇಕಡ ೪೭.೯ ರಷ್ಟು ಏರಿಕೆಯಾಗಿದೆ. ೨೦೨೩ರಲ್ಲಿ ಭಾರತಕ್ಕೆ ೯೫ ಲಕ್ಷ ೨೦ ಸಾವಿರ ವಿದೇಶಿ ಪ್ರವಾಸಿಗರು ಭೇಟಿ ನೀಡಿದ್ದರು. ಅದಕ್ಕೆ ಹೋಲಿಸಿದರೆ, ಸುಮಾರು ೩೧ ಲಕ್ಷ ಅಧಿಕ ಪ್ರವಾಸಿಗರು ಕಳೆದ ವರ್ಷ ಭೇಟಿ ನೀಡಿದ್ದಾರೆ. ಕೇಂದ್ರ ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಲೋಕಸಭೆಗೆ ನೀಡಿರುವ ಲಿಖಿತ ಉತ್ತರದಲ್ಲಿ ಈ ವಿಷಯ ತಿಳಿಸಿದ್ದಾರೆ. ಕೇಂದ್ರ ಸರ್ಕಾರ ಕೈಗೊಂಡ ಹಲವು ಕ್ರಮಗಳಿಂದಾಗಿ ಹೆಚ್ಚಿನ ಸಂಖ್ಯೆಯ ವಿದೇಶಿ ಪ್ರವಾಸಿಗರು ಭೇಟಿ ನೀಡಿದ್ದಾರೆ. ಅಮೆರಿಕ ಮತ್ತು ಬ್ರಿಟನ್‌ನಿಂದ ಅಧಿಕ ಸಂಖ್ಯೆಯ ಪ್ರವಾಸಿಗರು ಆಗಮಿಸಿದ್ದಾರೆ ಎಂದು ಹೇಳಿದರು. ಪ್ರವಾಸೋದ್ಯಮ ಉತ್ತೇಜನಕ್ಕೆ ಪ್ರಮುಖ ಪ್ರವಾಸಿ ತಾಣಗಳ ಸಮಗ್ರ ಅಭಿವೃದ್ಧಿಗೆ ೨೩ ರಾಜ್ಯಗಳ ೪೦ ಯೋಜನೆಗಳಿಗೆ ಸುಮಾರು ೩ ಸಾವಿರದ ೨೦೦ ಕೋಟಿ ರೂಪಾಯಿಗಳ ನೆರವನ್ನು ಮಂಜೂರು ಮಾಡಲಾಗಿದೆ ಎಂದು ಅವರು ತಿಳಿಸಿದ್ದಾರೆ.

<><*<><>*><>

ಈ ಹಣಕಾಸು ವರ್ಷದಲ್ಲಿ ಪ್ರಕೃತಿ ವಿಕೋಪಗಳಿಂದ ೨ ಸಾವಿರದ ೯೩೬ ಜನರು ಮೃತಪಟ್ಟಿದ್ದಾರೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಲೋಕಸಭೆಗೆ ಇಂದು ಲಿಖಿತ ಉತ್ತರ ನೀಡಿದ ಕೇಂದ್ರ ಗೃಹ ಖಾತೆ ರಾಜ್ಯ ಸಚಿವ ನಿತ್ಯಾನಂದ ರೈ, ಹಿಮಾಚಲ ಪ್ರದೇಶದಲ್ಲಿ ಪ್ರಕೃತಿ ವಿಕೋಪಗಳಿಂದಾಗಿ ಗರಿಷ್ಠ ೪೦೮ ಜನರು ಅಸುನೀಗಿದ್ದಾರೆ. ಅಲ್ಲದೆ, ಈ ವರ್ಷ ೬೧ ಸಾವಿರಕ್ಕೂ ಹೆಚ್ಚು ಜಾನವಾರುಗಳು ಸಾವನ್ನಪ್ಪಿವೆ. ೩ ಲಕ್ಷ ೬೦ ಸಾವಿರಕ್ಕೂ ಹೆಚ್ಚು ಮನೆಗಳು ಹಾನಿಯಾಗಿವೆ. ೧೪ ಲಕ್ಷ ಹೆಕ್ಟೇರ್‌ಗಳಿಗೂ ಹೆಚ್ಚು ಬೆಳೆ ಹಾನಿಯಾಗಿವೆ. ಅಸ್ಸಾಂನಲ್ಲಿ ಗರಿಷ್ಠ ೧ ಲಕ್ಷ ೫೬ ಸಾವಿರ ಮನೆಗಳು ಹಾನಿಗೊಳಗಾಗಿವೆ. ತಮಿಳುನಾಡಿನಲ್ಲಿ ೪ ಲಕ್ಷ ಹೆಕ್ಟೇರ್‌ಗೂ ಹೆಚ್ಚು ಬೆಳೆ ಹಾನಿಯಾಗಿದೆ ಎಂದು ಮಾಹಿತಿ ನೀಡಿದ್ದಾರೆ.

<><*<><>*><>

ನಾಳೆ ನಡೆಯಲಿರುವ ದೆಹಲಿಯ ವಿಧಾನಸಭಾ ಚುನಾವಣೆಗೆ ಸಕಲ ಸಿದ್ಧತೆ ಕೈಗೊಳ್ಳಲಾಗಿದೆ. ೭೦ ಸದಸ್ಯ ಬಲದ ದೆಹಲಿ ವಿಧಾನಸಭೆಗೆ ನಾಳೆ ಮತದಾನ ನಡೆಯಲಿದ್ದು, ಬೆಳಗ್ಗೆ ೭ ಗಂಟೆಯಿಂದ ಸಂಜೆ ೬ ಗಂಟೆವರೆಗೆ ಮತದಾರರು ತಮ್ಮ ಹಕ್ಕು ಚಲಾಯಿಸಲು ಅವಕಾಶ ಕಲ್ಪಿಸಲಾಗಿದೆ. ಒಂದು ಕೋಟಿ ೫೬ ಲಕ್ಷಕ್ಕೂ ಹೆಚ್ಚು ಮತದಾರರು, ಕಣದಲ್ಲಿರುವ ೬೯೯ ಅಭ್ಯರ್ಥಿಗಳ ರಾಜಕೀಯ ಭವಿಷ್ಯ ನಿರ್ಧರಿಸಲಿದ್ದಾರೆ. ಈ ಚುನಾವಣೆಯ ಬಹಿರಂಗ ಪ್ರಚಾರಕ್ಕೆ ನಿನ್ನೆ ಸಂಜೆ ತೆರೆ ಬಿದ್ದಿದೆ. ಸುಗಮ ಚುನಾವಣೆಗಾಗಿ ಚುನಾವಣಾ ಆಯೋಗ ೧ ಲಕ್ಷ ೮೦ ಸಾವಿರಕ್ಕೂ ಹೆಚ್ಚಿನ ಸಿಬ್ಬಂದಿಯನ್ನು ನಿಯೋಜಿಸಿದೆ. ಇಲ್ಲಿಯವರೆಗೆ ಸುಮಾರು ೨೨೦ ಕೋಟಿಗೂ ಅಧಿಕ ಮೌಲ್ಯದ ನಗದು, ಮದ್ಯ, ಮಾದಕ ದ್ರವ್ಯ, ಉಚಿತ ಸಾಮಗ್ರಿಗಳನ್ನು ವಶಪಡಿಸಿಕೊಳ್ಳಲಾಗಿದೆ.

<><*<><>*><>

ಉತ್ತಾರಖಂಡದ ಡೆಹರಾಡೂನ್‌ನಲ್ಲಿ ನಡೆಯುತ್ತಿರುವ ೩೮ನೇ ರಾಷ್ಟ್ರೀಯ ಕ್ರೀಡಾಕೂಟದ ಬ್ಯಾಡ್ಮಿಂಟನ್ ಸ್ಪರ್ಧೆಯಲ್ಲಿ ತಮಿಳುನಾಡಿನ ಸತೀಶ್ ಕುಮಾರ್.ಕೆ, ಎರಡು ಚಿನ್ನದ ಪದಕ ಗೆದ್ದಿದ್ದಾರೆ. ಅವರು, ಪುರುಷರ ಸಿಂಗಲ್ಸ್ ವಿಭಾಗದ ಫೈನಲ್‌ನಲ್ಲಿ ಸೂರ್ಯಾಕ್ಷ್ ರಾವತ್ ಅವರನ್ನು ೨೧-೧೭, ೨೧-೧೭ ಸೆಟ್‌ಗಳಿಂದ ಪರಾಭವಗೊಳಿಸಿ, ಚಿನ್ನದ ಪದಕ ವಿಜೇತರಾದರು. ಇದೇ ವೇಳೆ ಮಿಕ್ಸ್‌ಡ್ ಡಬಲ್ಸ್ ಫೈನಲ್ ಪಂದ್ಯದಲ್ಲಿ ಸತೀಶ್ ಕುಮಾರ್ ಮತ್ತು ಆದ್ಯಾ ವಾರಿಯತ್ ಜೋಡಿಯು, ಮಹಾರಾಷ್ಟ್ರದ ದೀಪ್ ರಾಂಬಿಯಾ ಮತ್ತು ಅಕ್ಷಯಾ ವಾರಂಗ್ ಜೋಡಿಯನ್ನು ೨೧-೧೧, ೨೦-೨೨ ಮತ್ತು ೨೧-೦೮ ಸೆಟ್‌ಗಳಿಂದ ಸೋಲಿಸಿ, ಚಿನ್ನದ ಪದಕ ಗೆದ್ದರು. ಪುರುಷರ ವಾಟರ್ ಪೋಲೊ ಸ್ಪರ್ಧೆಯಲ್ಲಿ ಮಹಾರಾಷ್ಟ್ರ ವಿರುದ್ಧ ೧೦-೯ ಅಂಕಗಳಿಂದ ಎಸ್.ಎಸ್.ಸಿ.ಬಿ ತಂಡ ರೋಚಕ ಜಯ ಸಾಧಿಸುವ ಮೂಲಕ ಚಿನ್ನದ ಪದಕ ಗಳಿಸಿದೆ. ಇದೇ ವೇಳೆ ಪಶ್ಚಿಮ ಬಂಗಾಳ ವಿರುದ್ಧ ೧೫-೧೪ ಅಂಕಗಳಿಂದ ಗೆಲವು ದಾಖಲಿಸಿರುವ ಕೇರಳ, ಕಂಚಿನ ಪದಕ ಪಡೆದಿದೆ. ಮಹಿಳೆಯರ ವಾಟರ್ ಪೋಲೊ ಸ್ಪರ್ಧೆಯಲ್ಲಿ ಮಹಾರಾಷ್ಟ್ರ ವಿರದ್ಧ ೧೧-೭ ಅಂಕಗಳಿಂದ ಕೇರಳ ಜಯ ಗಳಿಸಿದ್ದು, ಚಿನ್ನದ ಪದಕ ಗಳಿಸಿದೆ. ಕರ್ನಾಟಕ ವಿರುದ್ಧ ೧೧-೩ ಅಂಕಗಳಿಂದ ಪಶ್ಚಿಮ ಬಂಗಾಳ ಗೆಲುವು ದಾಖಲಿಸಿದ್ದು, ಕಂಚಿನ ಪದಕ ವಿಜೇತವಾಗಿದೆ. ಇದೇ ವೇಳೆ ರಾಷ್ಟ್ರೀಯ ಕ್ರೀಡಾಕೂಟದಲ್ಲಿ  ಕರ್ನಾಟಕ ೨೨ ಚಿನ್ನ ೧೦ ಬೆಳ್ಳಿ ಹಾಗೂ ೧೦ ಕಂಚಿನ ಪದಕಗಳೊಂದಿಗೆ ಅಗ್ರ ಸ್ಥಾನದಲ್ಲಿದೆ. ಸರ್ವಿಸಸ್ ೧೯ ಚಿನ್ನ, ೧೦ ಬೆಳ್ಳಿ ಮತ್ತು ೯ ಕಂಚಿನೊಂದಿಗೆ ೨ನೇ ಸ್ಥಾನದಲ್ಲಿದೆ. ಮೂರನೇ ಸ್ಥಾನದಲ್ಲಿರುವ ಮಹಾರಾಷ್ಟ್ರ ೧೫ ಚಿನ್ನ, ೨೭ ಬೆಳ್ಳಿ ಮತ್ತು ೨೧ ಕಂಚಿನ ಪದಕಗಳನ್ನು ಗಳಿಸಿದೆ.

**<><*<><>*><>**

ವಿಶ್ವ ಆಡಿಯೋ-ವಿಜುವಲ್ ಮತ್ತು ಮನರಂಜನಾ ಶೃಂಗಸಭೆ- ವೇವ್ಸ್-೨೦೨೫, ನಕಲಿ ಮಾಹಿತಿ ವಿರುದ್ಧ ಹೋರಾಡಲು ಕೃತಕ ಬುದ್ಧಿಮತ್ತೆ-ಎಐ, ಆಧಾರಿತ ಪರಿಹಾರಗಳನ್ನು ಅನಾವರಣಗೊಳಿಸಲಿದೆ. ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ, ಈ ಬಾರಿಯ 'ಟ್ರೂತ್ ಟೆಲ್ ಹ್ಯಾಕಥಾನ್' ಚಾಲೆಂಜ್, ವೇವ್ಸ್ ಸಮಾರಂಭದ ಒಂದು ಭಾಗವಾಗಿದ್ದು, ನೇರ ಪ್ರಸಾರದಲ್ಲಿನ ತಪ್ಪು ಮಾಹಿತಿಯನ್ನು ತಡೆಯಲು ಅಗತ್ಯ ಪರಿಹಾರಗಳನ್ನು ಒದಗಿಸುವ ಕ್ರಮವಾಗಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೮.೦೫ ಕ್ಕೆ <>*><>**